# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1595 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 21 /03/2025 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲೆಯಲ್ಲಿ ಕಾರ್ಮಿಕ ವಸತಿ ಯೋಜನೆ (Labour Housing Scheme) ಗಳು ಯಾವ ಹಂತದಲ್ಲಿವೆ; ಗಡಿ ರಾಜ್ಯಗಳಿಂದ ಬರುವ ವಲಸೆ ಕಾರ್ಮಿಕರಿಗೆ ವಿಜಯಪುರ ಜಿಲ್ಲೆಯಲ್ಲಿ ವಸತಿ, ಪಡಿತರ, ಆರೋಗ್ಯ ಸೇವೆಗಳು ಒದಗಿಸಲು ಸರ್ಕಾರದ ನೀತಿ ಏನು; (ಸಂಪೂರ್ಣ ಮಾಹಿತಿ ಒದಗಿಸುವುದು) | ಕಾರ್ಮಿಕರ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕರ್ನಾಟಕ ನಿಯಮಗಳು, 2006 ರ ನಿಯಮ 42 ರಲ್ಲಿ ಗೃಹ ಭಾಗ್ಯ ಸೌಲಭ್ಯದಡಿ 21 ರಿಂದ 50 ವರ್ಷದೊಳಗಿನ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ರೂ.2.00 ಲಕ್ಷಗಳ ಸಾಲ/ ಮುಂಗಡ ಸೌಲಭ್ಯ ಪಡೆಯಲು ಅವಕಾಶವಿರುತ್ತದೆ.<br><br>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ವಿಜಯಪುರ ಜಿಲ್ಲೆಯಲ್ಲಿ ಪ್ರಸ್ತುತ ಕಾರ್ಮಿಕ ವಸತಿ ಯೋಜನೆ ಅನುಷ್ಠಾನ ಮಾಡುತ್ತಿರುವುದಿಲ್ಲ.<br><br>ಈ ಕೆಳಕಂಡ ವೈದ್ಯಕೀಯ ಸಹಾಯ ಧನ ನೀಡಲಾಗುತ್ತಿದೆ.<br><br>1. ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ): ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ ರೂ.300/- ರಿಂದ ರೂ.20,000/-ವರೆಗೆ.<br>2. ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ): ರೂ.2,00,000/- ಗಳವರೆಗೆ.<br><br>ಮುಂದುವರೆದು, ನೋಂದಾಯಿತ ಫಲಾನುಭವಿಗಳಿಗೆ ಚಿಕಿತ್ಸಾ ವೆಚ್ಚಕ್ಕೆ ಸಂಬಂಧಿಸಿದಂತೆ ಅನುಕೂಲವಾಗುವಂತೆ ಈ ಕೆಳಕಂಡ ಸೌಲಭ್ಯಗಳನ್ನು ವಿತರಿಸಲಾಗುತ್ತಿದೆ. |

| | | |
|---|---|---|
| | | 1. ನಿಯಮ 48 ರಲ್ಲಿ ಪ್ರಮುಖ ವೈದ್ಯಕೀಯ ವೆಚ್ಚ ಮರುಪಾವತಿಗಾಗಿ ನಿಗದಿಪಡಿಸಿರುವ ಗರಿಷ್ಠ ರೂ.2.00 ಲಕ್ಷದ ಮಿತಿಯವರೆಗೆ ನೋಂದಾಯಿತ ಫಲಾನುಭವಿಗಳು ಮತ್ತು ಅವರ ಅವಲಂಬಿತರು ಸರ್ಕಾರದ ವೈದ್ಯಕೀಯ ಸಂಸ್ಥೆಗಳು, ಸರ್ಕಾರದ ವೈದ್ಯಕೀಯ ಕಾಲೇಜುಗಳಲ್ಲಿ ನೋಂದಾಯಿತ ಫಲಾನುಭವಿಗಳು ಮತ್ತು ಅವರ ಅವಲಂಬಿತರಿಗೆ ಸಿಜಿಹೆಚ್‌ಎಸ್ ದರಗಳನ್ವಯ ನಗದುರಹಿತ ಚಿಕಿತ್ಸೆ ಪಡೆಯಲು ಅವಕಾಶ ಕಲ್ಪಿಸಲು ಸಭೆಯಲ್ಲಿ ನಿರ್ಣಯಿಸಲಾಗಿರುತ್ತದೆ.<br>2. ಹೃದ್ರೋಗ ಮತ್ತು ಕ್ಯಾನ್ಸರ್ ಕಾಯಿಲೆಗಳಿಗೆ ನೋಂದಾಯಿತ ಫಲಾನುಭವಿಗಳು ಹಾಗೂ ಅವರ ಅವಲಂಬಿತರು ಚಿಕಿತ್ಸೆ ಪಡೆದಲ್ಲಿ, ಚಿಕಿತ್ಸೆ ಹಾಗೂ ಔಷಧಿಗಳ ವೆಚ್ಚವನ್ನು ಮರುಪಾವತಿ ಮೊತ್ತವನ್ನು ರೂ.5.00 ಲಕ್ಷಕ್ಕೆ ಹೆಚ್ಚಿಸಲು ನಿರ್ಣಯಿಸಲಾಗಿರುತ್ತದೆ<br>3. ನೋಂದಾಯಿತ ಫಲಾನುಭವಿಗಳು ರಸ್ತೆ ಹಾಗೂ ವಾಹನ ಅಪಘಾತಕ್ಕೆ ಒಳಗಾಗಿ ಯಾವುದೇ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆದಿದ್ದಲ್ಲಿ ಅಥವಾ ನಿರ್ಮಾಣ ಕಾಮಗಾರಿ ನಡೆಯುತ್ತಿರುವ ಸ್ಥಳಗಳಲ್ಲಿ ಅಪಘಾತ ಉಂಟಾಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಲ್ಲಿ ಉಂಟಾಗುವ ವೈದ್ಯಕೀಯ ವೆಚ್ಚವನ್ನು ಸಿಜಿಹೆಚ್‌ಎಸ್ ದರಗಳನ್ವಯ ಮಂಡಳಿಯ ಫಲಾನುಭವಿಗಳಿಗೆ ವೈದ್ಯಕೀಯ ಸಹಾಯ ಧನ ನೀಡಲಾಗುವುದು.<br>ಮಂಡಳಿಯ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಮತ್ತು ಅವರ ಅವಲಂಬಿತರಿಗೆ ಪ್ರವೆಂಟಿವ್ ಹೆಲ್ತ್ ಕೇರ್ ಯೋಜನೆಯಡಿ ವಿವಿಧ ರೀತಿಯ ವೈದ್ಯಕೀಯ ತಪಾಸಣೆಗಳನ್ನು ನಡೆಸಲಾಗುತ್ತಿದೆ. ಇದಲ್ಲದೇ ವಿಜಯಪುರ ಜಿಲ್ಲೆ ವ್ಯಾಪ್ತಿಯಲ್ಲಿ ಈಗಾಗಲೇ ಸಂಚಾರಿ ಆರೋಗ್ಯ ಕ್ಲಿನಿಕ್ ಯೋಜನೆಯಡಿ ಒಂದು ವಾಹನದ ಮೂಲಕ ನೋಂದಾಯಿತ ಕಾರ್ಮಿಕರು ಮತ್ತು ಅವರ ಅವಲಂಬಿತರಿಗೆ ಆರೋಗ್ಯ ತಪಾಸಣೆ ಮತ್ತು ಔಷದೋಪಾಚಾರವನ್ನು ಒದಗಿಸಲಾಗುತ್ತಿದೆ. |
| ಆ) | ರಾಜ್ಯ ಸರ್ಕಾರದ ಸಬ್ಸಿಡಿ ಪಡಿತರ (Ration Benefits) ಯೋಜನೆ ವಿಜಯಪುರ ಜಿಲ್ಲೆಯಲ್ಲಿ ಸೂಕ್ತವಾಗಿ ಜಾರಿಗೆ ತರುವ ಕುರಿತು ಇಲಾಖೆಯ ವರದಿ ಏನು; | **ಅನ್ವಯಿಸುವುದಿಲ್ಲ** |

| | | |
|---|---|---|
| ಇ) | ವಿಜಯಪುರ ಜಿಲ್ಲೆಯಲ್ಲಿ ಮಹಿಳಾ ಕಾರ್ಮಿಕರಿಗಾಗಿ ಇರುವ ವಿಶೇಷ ಕಲ್ಯಾಣ ಯೋಜನೆಗಳಾವುವು; ಬಾಲ ಕಾರ್ಮಿಕರ ನಿಯಂತ್ರಣಕ್ಕಾಗಿ ಜಿಲ್ಲೆಯಲ್ಲಿ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ಮಾಹಿತಿ ಒದಗಿಸುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳಲ್ಲಿ ವಿಜಯಪುರ ಜಿಲ್ಲೆಯು ಸೇರಿದಂತೆ ರಾಜ್ಯದ್ಯಂತ ಮಹಿಳಾ ಕಾರ್ಮಿಕರಿಗಾಗಿ ಇರುವ ವಿಶೇಷ ಕಲ್ಯಾಣ ಯೋಜನೆಗಳು ಮತ್ತು ಬಾಲಕಾರ್ಮಿಕರ ನಿಯಂತ್ರಣಕ್ಕಾಗಿ ತೆಗೆದುಕೊಂಡಿರುವ ಕ್ರಮಗಳ ವಿವರ ಈ ಕೆಳಕಂಡಂತಿದೆ.<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ</u>**:<br>ಮಂಡಳಿಯು ಅನುಷ್ಠಾನಗೊಳಿಸುತ್ತಿರುವ ಎಲ್ಲಾ ಸೌಲಭ್ಯಗಳನ್ನು ನೋಂದಾಯಿತ ಮಹಿಳಾ ಕಾರ್ಮಿಕರೂ ಪಡೆಯಲು ಅರ್ಹರಿರುತ್ತಾರೆ. ಮಂಡಳಿಯು ರೂಪಿಸಿರುವ ಸೌಲಭ್ಯಗಳ ವಿವರವನ್ನು **ಅನುಬಂಧದಲ್ಲಿ** ಒದಗಿಸಿದೆ.<br><br>ಅದರಲ್ಲಿ ಮಹಿಳೆಯರಿಗಾಗಿ ರೂಪಿಸಿರುವ ವಿಶೇಷ ಸೌಲಭ್ಯಗಳ ವಿವರ ಈ ಕೆಳಕಂಡಂತಿದೆ:<br>1. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ.6,000/- ಗಳ** ಸಹಾಯಧನ.<br>2. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ.50,000/-<br><br>**<u>ಬಾಲ ಕಾರ್ಮಿಕ ಯೋಜನೆ ಸೊಸೈಟಿ:</u>**<br>ಬಾಲಕಾರ್ಮಿಕರ ನಿಯಂತ್ರಣಕ್ಕಾಗಿ ಸರ್ಕಾರವು ಈ ಕೆಳಕಂಡ ಪ್ರಮುಖ ಕ್ರಮಗಳನ್ನು ಕೈಗೊಂಡಿರುತ್ತದೆ;<br>• ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯನ್ನು ಸ್ಥಾಪಿಸಿದ್ದು, ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986 ನಿಯಮಗಳು (ಕೇಂದ್ರ/ರಾಜ್ಯ) ಹಾಗೂ ಎಸ್.ಓ.ಪಿ (ಕೇಂದ್ರ/ರಾಜ್ಯ) ಯನ್ನು ಪರಿಣಾಮಕಾರಿ ಅನುಷ್ಠಾನ ಮಾಡುವುದು.<br>• ಜಿಲ್ಲಾ ದಂಡಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಕಾರ್ಯಪಡೆ (Task Force) ಯನ್ನು ರಚಿಸಲಾಗಿದೆ.<br>• ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿಯನ್ನು ಪರಿಣಾಮಕಾರಿಯಾಗಿ ನಿರ್ಮೂಲನೆ ಮಾಡುವ ಸಲುವಾಗಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ |

| | | |
|---|---|---|
| | | ಅಧ್ಯಕ್ಷತೆಯಲ್ಲಿ ಸಲಹಾ ಸಮಿತಿ, ಕಾರ್ಯಕಾರಿ ಸಮಿತಿಗಳನ್ನು ಹಾಗೂ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ಬಾಲ ಕಾರ್ಮಿಕತೆ ನಿರ್ಮೂಲನೆ ಹಾಗೂ ಪುನರ್ವಸತಿ ಸಮಿತಿಗಳನ್ನು ರಚಿಸಲಾಗಿರುತ್ತದೆ.<br>• ಬಾಲ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986ರ ಕಲಂ 17ರಡಿ ಸರ್ಕಾರದ 11 ಇಲಾಖೆಗಳ ಅಧಿಕಾರಿಗಳನ್ನು ನಿರೀಕ್ಷಕರುಗಳನ್ನಾಗಿ ನೇಮಿಸಲಾಗಿದೆ. ಅಧಿಸೂಚಿಸಲ್ಪಟ್ಟ ಅಧಿಕಾರಿಗಳ ಹೋಬಳಿವಾರು ತಂಡವನ್ನು ರಚಿಸಿ ಪ್ರತಿಯೊಂದು ತಂಡವೂ ಮಾಸಿಕ ಕನಿಷ್ಠ 15 ತಪಾಸಣೆಗಳನ್ನು ಕೈಗೊಳ್ಳಲು ನಿರ್ದೇಶನ ನೀಡಲಾಗಿದ್ದು, ತಪಾಸಣೆಗಳಲ್ಲಿ/ ದಾಳಿಗಳಲ್ಲಿ ಪತ್ತೆಯಾದ ಬಾಲಕಾರ್ಮಿಕರನ್ನು ಮಕ್ಕಳ ಕಲ್ಯಾಣ ಸಮಿತಿ (Child Welfare Committee)ಯ ಬಾಲಕರ ಮತ್ತು ಬಾಲಕಿಯರ ಬಾಲಮಂದಿರಗಳಿಗೆ ಮತ್ತು ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಿಗೆ, ಮುಖ್ಯವಾಹಿನಿ ಶಾಲೆಗಳಲ್ಲಿ ಮಕ್ಕಳ ಅರ್ಹತೆಗನುಗುಣವಾಗಿ ದಾಖಲು ಮಾಡಲು ಕ್ರಮ ಕೈಗೊಳ್ಳುವುದು.<br>ವಿಜಯಪುರ ಜಿಲ್ಲೆಯಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿಯ ನಿರ್ಮೂಲನೆ ಮಾಡಿ ಜಿಲ್ಲೆಯನ್ನು ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮುಕ್ತ ಜಿಲ್ಲೆಯನ್ನಾಗಿ ಮಾಡಲು ವ್ಯಾಪಕವಾದ ಜಾಗೃತಿ ಮೂಡಿಸಲಾಗುತ್ತಿದೆ. ಗೋಡೆ ಬರಹಗಳು, ಕರಪತ್ರಗಳು, ಆಟೋ ಪ್ರಚಾರಗಳು, ತರಬೇತಿ ಕಾರ್ಯಾಗಾರಗಳು, ಬಿತ್ತಿ ಪತ್ರಗಳು, ಬೀದಿನಾಟಕಗಳು ಹಾಗೂ ಕಾನೂನು ಅರಿವು-ನೆರವು ಕಾರ್ಯಕ್ರಮಗಳ ನಿರಂತರ ಆಯೋಜನೆ ಹಾಗೂ ಸಾಂಪ್ರದಾಯಿಕ ಮಾಧ್ಯಮಗಳು ಹಾಗೂ ಆಧುನಿಕ ವಿದ್ಯುನ್ಮಾನ/ ಮುದ್ರಣ ಮಾಧ್ಯಮಗಳನ್ನು ಬಳಸಿಕೊಂಡು ಈ ಬಗ್ಗೆ "ಅರಿವು-ನೆರವು" ಕಾರ್ಯವನ್ನು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ನಡೆಸಲಾಗುತ್ತಿದೆ.<br>ವಿಜಯಪುರ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಒಟ್ಟು 2935 ತಪಾಸಣೆಗಳನ್ನು ನಡೆಸಿ 48 ಬಾಲ ಕಾರ್ಮಿಕರನ್ನು ಪತ್ತೆ ಹಚ್ಚಲಾಗಿರುತ್ತದೆ ಹಾಗೂ ಬಾಲ ಕಾರ್ಮಿಕರನ್ನು ನೇಮಿಸಿಕೊಂಡು ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ರಡಿ ಪ್ರಾವಧಾನಗಳನ್ನು |

| | | |
|---|---|---|
| | | ಉಲ್ಲಂಘನೆ ಮಾಡಿದ ಮಾಲೀಕರ ವಿರುದ್ಧ ಒಟ್ಟು 74 ಮೊಕದ್ದಮೆಗಳನ್ನು ಸಕ್ಷಮ ನ್ಯಾಯಾಲಯಗಳಲ್ಲಿ ದಾಖಲಿಸಲಾಗಿರುತ್ತದೆ. ತಪ್ಪಿತಸ್ಥ ಮಾಲೀಕರಿಗೆ ಮಾನ್ಯ ನ್ಯಾಯಾಲಯಗಳು ರೂ.30,000/- ಗಳ ದಂಡ ವಿದಿಸಿರುತ್ತವೆ.<br><br>**4. <u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ</u> :**<br>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ವಿಜಯಪುರ ಜಿಲ್ಲೆಗೆ ಸಂಬಂಧಿಸಿದಂತೆ ವಂತಿಗೆ ಪಾವತಿಸುವ ಸಂಘಟಿತ ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯವನ್ನು ಮೊದಲ ಎರಡು ಮಕ್ಕಳಿಗೆ ನೀಡಲಾಗುತ್ತದೆ. 2024-25 ನೇ ಸಾಲಿನಲ್ಲಿ ವಿಜಯಪುರ ಜಿಲ್ಲೆಯಿಂದ ಯಾವುದೇ ಅರ್ಜಿಗಳು ಮಂಡಳಿಗೆ ಸಹಾಯ ಧನ ಬಿಡುಗಡೆಗಾಗಿ ಸ್ವೀಕೃತಗೊಂಡಿರುವುದಿಲ್ಲ. |
| ಈ) | ಸದರಿ ಜಿಲ್ಲೆಯಲ್ಲಿ ಮಹಿಳಾ ಕಾರ್ಮಿಕರ ಸುರಕ್ಷತೆ, ವಸತಿ ಮತ್ತು ಶೌಚಾಲಯ ವ್ಯವಸ್ಥೆ ಕಲ್ಪಿಸಲಾಗಿದೆಯೇ; ಸರ್ಕಾರ ಈ ಬಗ್ಗೆ ನಿರ್ದಿಷ್ಟ ತೀರ್ಮಾನ ತೆಗೆದುಕೊಂಡಿದೆಯೇ; ಕಿರಿಯ ಕಾರ್ಮಿಕರಿಗೆ (Apprenticeship & Skill Training) ವಿಜಯಪುರದಲ್ಲಿ ಕಾರ್ಯಾಚರಿಸುತ್ತಿರುವ ಕೇಂದ್ರಗಳ ಸಂಖ್ಯೆ ಎಷ್ಟು ಮತ್ತು ಅವುಗಳ ಪರಿಣಾಮಕಾರಿತ್ವ ಹೇಗಿದೆ? | ವಿಜಯಪುರ ಜಿಲ್ಲೆಯಲ್ಲಿ ಕಾರ್ಖಾನೆಗಳ ಕಾಯ್ದೆ 1948 ರ ಅಡಿ ಯಲ್ಲಿ ಒಟ್ಟು 119 ಕಾರ್ಖಾನೆಗಳು ನೋಂದಣಿಯಾಗಿದ್ದು, ಇವುಗಳ ಪೈಕಿ 85 ರಲ್ಲಿ ಸುಮಾರು 1215 ಮಹಿಳಾ ಕಾರ್ಮಿಕರು ಕಾರ್ಯನಿರ್ವಹಿಸುತ್ತಿದ್ದು, ಕಾರ್ಖಾನೆಗಳಲ್ಲಿ ಸುರಕ್ಷಿತ ಮತ್ತು ಶೌಚಾಲಯಗಳ ವ್ಯವಸ್ಥೆ ಕುರಿತು ಇಲಾಖಾಧಿಕಾರಿಗಳು ಪರಿಶೀಲಿಸುತ್ತಿರುತ್ತಾರೆ. ಈ ಕುರಿತು ಯಾವುದೇ ದೂರುಗಳು ಸ್ವೀಕೃತಿಯಾಗಿರುವುದಿಲ್ಲ.<br><br>ಮುಂದುವರೆದು ಕಾರ್ಮಿಕರಿಗೆ ಯಾವುದೇ ರೀತಿಯ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ಈ ಇಲಾಖೆಯಿಂದ ನೀಡುತ್ತಿರುವುದಿಲ್ಲ. |

**ಕಾಇ 133 ಎಲ್ಇಟಿ 2025**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**